**All India Radio: Bangalore**
**National Bulletin In Kannada**
**08.03.2025 13.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**08.03.2025 13.10 p.m.**
**<><><><>**

ಮುಖ್ಯಾಂಶಗಳು

1. ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ: ಲಿಂಗ ಸಮಾನತೆಯೆಡೆಗೆ ಕಾರ್ಯೋನ್ಮುಖರಾಗಲು ರಾಷ್ಟ್ರಪತಿ ಕರೆ
2. ಗುಜರಾತ್‌ನ ನವಸಾರಿಯಲ್ಲಿ ಲಖ್‌ಪತಿ ದೀದಿಯರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಸಂವಾದ
3. ಉತ್ತರ ಐರ್ಲೆಂಡ್‌ನ ಬೆಲ್‌ಫಾಸ್ಟ್‌ನಲ್ಲಿ ನೂತನ ಭಾರತೀಯ ದೂತಾವಾಸ ಕಚೇರಿ ಉದ್ಘಾಟಿಸಿದ ವಿದೇಶಾಂಗ ಸಚಿವ ಎಸ್. ಜೈಶಂಕರ್
4. ಮಹಿಳಾ ಪ್ರೀಮಿಯರ್ ಲೀಗ್ ಟಿ೨೦ ಕ್ರಿಕೆಟ್ : ಉತ್ತರಪ್ರದೇಶದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಯುಪಿ ವಾರಿಯರ್ಸ್ ಮುಖಾಮುಖಿ

<><><><>

ಇಂದು ಜಗತ್ತಿನಾದ್ಯಂತ ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲಾಗುತ್ತಿದೆ. ರಾಷ್ಟ್ರೀಯ, ಜನಾಂಗೀಯ, ಭಾಷಾ, ಸಾಂಸ್ಕೃತಿಕ, ಆರ್ಥಿಕ ಅಥವಾ ರಾಜಕೀಯ ವಲಯಗಳಲ್ಲಿ ಮಹಿಳೆಯರ ಸಾಧನೆಯನ್ನು ಗುರುತಿಸುವ ದಿನ ಇದಾಗಿದೆ. 'ಎಲ್ಲಾ ಮಹಿಳೆಯರು ಮತ್ತು ಹೆಣ್ಣು ಮಕ್ಕಳಿಗಾಗಿ ಹಕ್ಕುಗಳು, ಸಮಾನತೆ, ಸಬಲೀಕರಣ' ಎಂಬುದು ಈ ಬಾರಿಯ ಮಹಿಳಾ ದಿನದ ಧ್ಯೇಯವಾಕ್ಯವಾಗಿದೆ. ಈ ವಿಷಯದಡಿ ಮಹಿಳೆಯರಿಗೆ ಸಮಾನ ಹಕ್ಕುಗಳು, ಅಧಿಕಾರ ಮತ್ತು ಅವಕಾಶಗಳಿಗೆ ದಾರಿ ಮಾಡಿಕೊಡುವಂತಹ ಸಮಾಜ ನಿರ್ಮಾಣಕ್ಕೆ ಕ್ರಮವಹಿಸಲು ಜನರನ್ನು ಪ್ರೇರೇಪಿಸಲಾಗುತ್ತದೆ. ಸಾಮಾಜಿಕ ಮಾಧ್ಯಮದಲ್ಲಿ ಮಹಿಳಾ ದಿನದ ಶುಭಾಶಯ ಕೋರಿರುವ ರಾಷ್ಟ್ರಪತಿ ದ್ರೌಪದಿ ಮುರ್ಮು, ಈ ದಿನ ಮಹಿಳೆಯರ ಸಾಧನೆಗಳು ಹಾಗೂ ಕೊಡುಗೆಗಳನ್ನು ಸಂಭ್ರಮಿಸುವ ದಿನವಾಗಿದೆ. ಪ್ರತಿಯೊಬ್ಬರ ಸಹಕಾರ ಹಾಗೂ ಕೊಡುಗೆ ಮೂಲಕ ಮಹಿಳೆಯರು ಹೆಣ್ಣು ಮಕ್ಕಳು ಯಾವುದೇ ಅಂಜಿಕೆ ಇಲ್ಲದೆ ತಮ್ಮ ಕನಸುಗಳನ್ನು ನನಸಾಗಿಸುವ ಒಂದು ಲಿಂಗ-

ಸಮಾನ ಜಗತ್ತನ್ನು ಸೃಷ್ಟಿಸಲು ಸಾಧ್ಯ ಎಂದಿದ್ದಾರೆ. ಮಹಿಳೆಯರು ಸಮಾಜದ ಬೆನ್ನೆಲುಬಾಗಿದ್ದು, ದೃಢ ಮನಸ್ಸು, ಬದ್ಧತೆ ಹಾಗೂ ನಾಯಕತ್ವದ ಗುಣಗಳಿಂದ ಸಮಾಜದಲ್ಲಿ ಪರಿವರ್ತನಾತ್ಮಕ ಬದಲಾವಣೆಗೆ ಕೊಡುಗೆ ನೀಡುತ್ತಾರೆ ಎಂದು ಉಪರಾಷ್ಟ್ರಪತಿ ಜಗದೀಪ್ ಧನಕರ್ ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಮಹಿಳಾ ದಿನದಂದು ಸಮಸ್ತ ವನಿತಾ ಸಮಾಜಕ್ಕೆ ನಮನ ಸಲ್ಲಿಸಿರುವ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸರ್ಕಾರ ವಿವಿಧ ಯೋಜನೆ ಹಾಗೂ ಕಾರ್ಯಕ್ರಮಗಳ ಮೂಲಕ ಮಹಿಳಾ ಸಬಲೀಕರಣಕ್ಕಾಗಿ ಸದಾ ಶ್ರಮಿಸುತ್ತಿದೆ ಎಂದು ಹೇಳಿದ್ದಾರೆ.

ಈ ಮೊದಲು ಭರವಸೆ ನೀಡಿದ್ದಂತೆ ಪ್ರಧಾನಿ ನರೇಂದ್ರ ಮೋದಿ ಅವರು ಅಂತಾರಾಷ್ಟ್ರೀಯ ಮಹಿಳಾ ದಿನವನ್ನು ಆಚರಿಸಲು ತಮ್ಮ ಸಾಮಾಜಿಕ ಮಾಧ್ಯಮ ಖಾತೆಗಳನ್ನು ಒಂದು ದಿನದ ಮಟ್ಟಿಗೆ ಸ್ಫೂರ್ತಿದಾಯಕ ಮಹಿಳೆಯರಿಗೆ ಹಸ್ತಾಂತರಿಸಿದ್ದಾರೆ. ಪ್ರಧಾನಮಂತ್ರಿಗಳ ಸಾಮಾಜಿಕ ಮಾಧ್ಯಮ ಖಾತೆಗಳ ಮೂಲಕ ಹಲವಾರು ಮಹಿಳಾ ಸಾಧಕರು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡಿದ್ದಾರೆ.

<><><>

ನವದೆಹಲಿಯ ವಿಜ್ಞಾನ ಭವನದಲ್ಲಿ ಮಹಿಳಾ ಹಾಗು ಮಕ್ಕಳ ಅಭಿವೃದ್ಧಿ ಸಚಿವಾಲಯ 'ನಾರಿಶಕ್ತಿಯಿಂದ ವಿಕಸಿತ ಭಾರತ' ಎಂಬ ವಿಷಯದ ಕುರಿತು ರಾಷ್ಟ್ರೀಯ ಸಮ್ಮೇಳನವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಉದ್ಘಾಟಿಸಿದರು. ಈ ವೇಳೆ, ಮಹಿಳೆಯರ ಕೊಡುಗೆಗಳನ್ನು ಗೌರವಿಸುವ ದಿನ ಇದಾಗಿದ್ದು, ಲಿಂಗ ಸಮಾನತೆಯೆಡೆಗೆ ಸಮಾಜವನ್ನು ಕೊಂಡೊಯ್ಯುವ ಅಗತ್ಯವಿದೆ ಎಂದ ಅವರು, ಆ ದಿಸೆಯಲ್ಲಿ ಕಾರ್ಯೋನ್ಮುಖರಾಗಲು ಕರೆ ನೀಡಿದರು. ದೇಶದ ನಾರಿಶಕ್ತಿ ಆರ್ಥಿಕ ಹಾಗೂ ಸಾಮಾಜಿಕವಾಗಿ ಸಶಕ್ತರಾಗಲು ಹಾಗೂ ವಿಕಸಿತ ಭಾರತದ ಗುರಿಯೆಡೆಗೆ ಸಾಗಲು ಮುಂದಾಳತ್ವ ವಹಿಸಲು ಕೇಂದ್ರ ಸರ್ಕಾರ ನಿರಂತರ ಪ್ರಯತ್ನ ಮಾಡುತ್ತಿದೆ. ತಳಮಟ್ಟದಿಂದ ಮಹಿಳಾ ಸಬಲೀಕರಣಕ್ಕಾಗಿ ಮಹಿಳೆಯರನ್ನು ಸ್ವಸಹಾಯ ಸಂಘಗಳೊಂದಿಗೆ ತೊಡಗಿಸಿಕೊಳ್ಳಲಾಗುತ್ತಿದೆ. ಸರ್ಕಾರದ ಇಂತಹ ಹಲವು ಕ್ರಮಗಳು ಮಹಿಳೆಯರಲ್ಲಿ ಆತ್ಮವಿಶ್ವಾಸ ಹೆಚ್ಚಿಸಿ ಜೀವನದಲ್ಲಿ ಹೊಸ ಎತ್ತರಕ್ಕೇರಲು ಪ್ರೇರೇಪಿಸುತ್ತಿವೆ ಎಂದು ರಾಷ್ಟ್ರಪತಿ ತಿಳಿಸಿದರು.

***ಧ್ವನಿ ರಾಷ್ಟ್ರಪತಿ **** (೪೪ ಸೆಕೆಂಡ್‌ಗಳು)

ಉದ್ಘಾಟನಾ ಸಮಾರಂಭದ ನಂತರ ಉನ್ನತ ಮಟ್ಟದ ಚರ್ಚೆ ನಡೆಯಲಿದೆ. ಮೂರು ತಾಂತ್ರಿಕ ಅಧಿವೇಶನಗಳನ್ನು ಆಯೋಜಿಸಲಾಗಿದ್ದು, ಈ ಕಾರ್ಯಕ್ರಮ ತಮ್ಮ ತಮ್ಮ ಕ್ಷೇತ್ರದಲ್ಲಿ ಸಾಧನೆ ಮಾಡಿರುವಂತಹ ಮಹಿಳೆಯರು ಒಂದೇ ವೇದಿಕೆಯಡಿ ಒಟ್ಟುಗೂಡಲು ಅವಕಾಶ ಒದಗಿಸುತ್ತದೆ. ಈ ವೇಳೆ ಚರ್ಚೆಗಳು, ಪ್ರದರ್ಶನಗಳು ಮತ್ತು ಕಥಾನಕಗಳ ಮೂಲಕ ಪ್ರಗತಿಪರ ಭಾರತವನ್ನು ನಿರ್ಮಿಸಲು ಮಹಿಳೆಯರ ಕೊಡುಗೆಗಳನ್ನು ವಿಶಿಷ್ಟ ಡಿಜಿಟಲ್ ಮಾಧ್ಯಮ ಮತ್ತು ಸಂವಾದಾತ್ಮಕ ವಲಯ ಪ್ರದರ್ಶಿಸಿದೆ.

<><><>

ಅಂತಾರಾಷ್ಟ್ರೀಯ ಮಹಿಳಾ ದಿನದ ಅಂಗವಾಗಿ ಇಂದು ಪ್ರಧಾನಿ ನರೇಂದ್ರ ಮೋದಿ ಗುಜರಾತ್‌ನ ನವಸಾರಿಯಲ್ಲಿ ಲಖ್‌ಪತಿ ದೀದಿ ಯೋಜನೆಯ ಹತ್ತು ಫಲಾನುಭವಿಗಳೊಂದಿಗೆ ಸಂವಾದ ನಡೆಸಿದರು. ಬಳಿಕ ವನ್ಸಿ-ಬೋರ್ಸಿಯಲ್ಲಿ ನಡೆದ ಲಖ್‌ಪತಿ ದೀದಿ ಸಮ್ಮೇಳನದಲ್ಲಿ ಪ್ರಧಾನಿ ಭಾಗವಹಿಸಿದರು. ಈ ವೇಳೆ ಅವರು, ೨೫ ಸಾವಿರಕ್ಕೂ ಹೆಚ್ಚು ಸ್ವಸಹಾಯ ಗುಂಪುಗಳ ಎರಡೂವರೆ ಲಕ್ಷಕ್ಕೂ ಹೆಚ್ಚು ಮಹಿಳೆಯರಿಗೆ ೪೫೦ ಕೋಟಿ ರೂಪಾಯಿ ಆರ್ಥಿಕ ನೆರವು ವಿತರಿಸಿದರು. ನವಸಾರಿ ವಲ್ಸಾಡ್ ಮತ್ತು ಡಾಂಗ್ ಜಿಲ್ಲೆಗಳ ಒಂದು ಲಕ್ಷಕ್ಕೂ ಹೆಚ್ಚು ಲಖ್‌ಪತಿ ದೀದಿಗಳು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದಾರೆ. ಇದೇ ವೇಳೆ ಅವರು, ಜಿ-ಸಫಲ್ ಮತ್ತು ಜಿ-ಮೈತ್ರಿ ಎಂಬ ಎರಡು ರಾಜ್ಯ ಉಪಕ್ರಮಗಳಿಗೆ ಚಾಲನೆ ನೀಡಿದರು.

<><><>

ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಇಂದು ಸಂಸತ್ ಭವನದ ಸಂಕೀರ್ಣದಲ್ಲಿ ಸಂವಿಧಾನ ಸಭೆಯ ಮಹಿಳಾ ಸದಸ್ಯರ ಜೀವನದ ಕುರಿತಾದ ಪ್ರದರ್ಶನವನ್ನು ಉದ್ಘಾಟಿಸಲಿದ್ದಾರೆ. ಈ ಕಾರ್ಯಕ್ರಮ ಸಂವಿಧಾನ ಅನುಷ್ಠಾನಗೊಂಡು ೭೫ ವರ್ಷ ಪೂರೈಸಿರುವುದನ್ನು ಆಚರಿಸುತ್ತದೆ. ಮಹಿಳಾ ದಿನದ ಅಂಗವಾಗಿ ರಾಷ್ಟ್ರೀಯ ಮಹಿಳಾ ಆಯೋಗ ಅಖಿಲ ಭಾರತೀಯ ಅಧಿವಕ್ತ್ ಪರಿಷತ್ ಸಹಯೋಗದೊಂದಿಗೆ ಅಖಿಲ ಭಾರತ ಮಹಿಳಾ ವಕೀಲರ ಸಂಘವನ್ನು ಆಯೋಜಿಸಲಿದೆ.

<><><>

ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಉತ್ತರ ಐರ್ಲೆಂಡ್‌ನ ಬೆಲ್‌ಫಾಸ್ಟ್‌ನಲ್ಲಿ ನಿನ್ನೆ ಭಾರತೀಯ ದೂತಾವಾಸ ಕಚೇರಿಯನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಡಾ. ಜೈಶಂಕರ್, ಬೆಲ್‌ಫಾಸ್ಟ್‌ನಲ್ಲಿರುವ ದೂತಾವಾಸ ಕಚೇರಿ ಭಾರತ - ಐರ್ಲೆಂಡ್ ನಡುವಿನ ವ್ಯಾಪಾರ,

ತಂತ್ರಜ್ಞಾನ, ವ್ಯವಹಾರ ಮತ್ತು ಶಿಕ್ಷಣದಲ್ಲಿ ದ್ವಿಪಕ್ಷೀಯ ಸಹಕಾರವನ್ನು ಮತ್ತಷ್ಟು ಅನ್ವೇಷಿಸಲಿದ್ದು, ಭಾರತೀಯ ಸಮುದಾಯದ ಅಗತ್ಯಗಳನ್ನು ಪೂರೈಸಲಿದೆ ಎಂದು ಹೇಳಿದರು.ವಿದೇಶಾಂಗ ಸಚಿವರು ಉತ್ತರ ಐರ್ಲೆಂಡ್‌ನ ಉಪ ಪ್ರಥಮ ಸಚಿವೆ ಎಮ್ಮಾ ಲಿಟಲ್ ಪೆಂಗೆಲ್ಲಿ ಮತ್ತು ಸಚಿವೆ ಐಸ್ಲಿಂಗ್ ರೀಲಿ ಅವರನ್ನು ಬೆಲ್‌ಫಾಸ್ಟ್‌ನಲ್ಲಿ ಭೇಟಿಯಾದರು. ಇದೇ ವೇಳೆ ಅವರು, ಬೆಲ್‌ಫಾಸ್ಟ್‌ನಲ್ಲಿರುವ ಕ್ವೀನ್ಸ್ ವಿಶ್ವವಿದ್ಯಾಲಯಕ್ಕೂ ಭೇಟಿ ನೀಡಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಇದೇ ೧೧ ಮತ್ತು ೧೨ ರಂದು ಎರಡು ದಿನಗಳ ಭೇಟಿಗಾಗಿ ಮಾರಿಷಸ್‌ಗೆ ಭೇಟಿ ನೀಡಲಿದ್ದಾರೆ. ಈ ವೇಳೆ ಅವರು ಮಾರಿಷಸ್ ರಾಷ್ಟ್ರೀಯ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಭಾರತೀಯ ರಕ್ಷಣಾ ಪಡೆಗಳ ತುಕಡಿಯೂ ಈ ಆಚರಣೆಯಲ್ಲಿ ಭಾಗವಹಿಸಲಿದೆ. ಈ ಭೇಟಿಯ ಸಮಯದಲ್ಲಿ, ಪ್ರಧಾನಿ, ಮಾರಿಷಸ್ ಅಧ್ಯಕ್ಷರು ಹಾಗೂ ಪ್ರಧಾನಮಂತ್ರಿಯವರನ್ನು ಭೇಟಿ ಮಾಡಲಿದ್ದು, ಮಾರಿಷಸ್‌ನ ಹಿರಿಯ ನಾಯಕರೊಂದಿಗೆ ಸಭೆ ನಡೆಸಲಿದ್ದಾರೆ. ಇದೇ ವೇಳೆ ಪ್ರಧಾನಿ, ಅಲ್ಲಿನ ಭಾರತೀಯ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದು, ಭಾರತದ ಅನುದಾನದಡಿ ನಿರ್ಮಿಸಲಾದ ನಾಗರಿಕ ಸೇವಾ ಕಾಲೇಜು ಮತ್ತು ಪ್ರದೇಶ ಆರೋಗ್ಯ ಕೇಂದ್ರವನ್ನು ಉದ್ಘಾಟಿಸಲಿದ್ದಾರೆ. ಈ ಭೇಟಿಯ ಸಮಯದಲ್ಲಿ ಹಲವಾರು ಒಪ್ಪಂದಗಳನ್ನು ವಿನಿಮಯ ಮಾಡಿಕೊಳ್ಳುವ ನಿರೀಕ್ಷೆ ಇದೆ.

<><><><>

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ನಿನ್ನೆ ರಷ್ಯಾದ ಉಪ ವಿದೇಶಾಂಗ ಸಚಿವ ಆಂಡ್ರೆ ರುಡೆಂಕೊ ಅವರೊಂದಿಗೆ ದ್ವಿಪಕ್ಷೀಯ ಸಮಾಲೋಚನೆಗಳನ್ನು ನಡೆಸಿದರು. ಸಮಾಲೋಚನೆಯ ಸಮಯದಲ್ಲಿ, ಉಭಯ ನಾಯಕರು ದ್ವಿಪಕ್ಷೀಯ ಸಂಬಂಧಗಳ ಪ್ರಗತಿ ಪರಿಶೀಲಿಸಿದರು ಮತ್ತು ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ವಿಚಾರ ವಿನಿಮಯ ಮಾಡಿಕೊಂಡರು. ಕಳೆದ ವರ್ಷ ಜುಲೈನಲ್ಲಿ ಮಾಸ್ಕೋದಲ್ಲಿ ನಡೆದ ೨೨ನೇ ವಾರ್ಷಿಕ ಶೃಂಗಸಭೆಯಲ್ಲಿ ತೆಗೆದುಕೊಂಡ ನಿರ್ಧಾರಗಳ ಅನುಷ್ಠಾನದ ಕುರಿತು ಎರಡೂ ಕಡೆಯವರು ಪ್ರಗತಿಯನ್ನು ಪರಿಶೀಲಿಸಿದರು. ಭೇಟಿಯ ಸಮಯದಲ್ಲಿ, ವಿದೇಶಾಂಗ ಕಾರ್ಯದರ್ಶಿ ರಷ್ಯಾದ ಅಧ್ಯಕ್ಷೀಯ ಕಾರ್ಯನಿರ್ವಾಹಕ ಕಚೇರಿಯ ಉಪ ಮುಖ್ಯಸ್ಥ ಮ್ಯಾಕ್ಸಿಮ್ ಒರೆಶ್ಕಿನ್, ರಷ್ಯಾದ

ಅಧ್ಯಕ್ಷರ ಸಹಾಯಕ ಯೂರಿ ಉಷಾಕೋವ್ ಮತ್ತು ಕೈಗಾರಿಕೆ ಮತ್ತು ವ್ಯಾಪಾರ ಉಪ ಸಚಿವ ಅಲೆಕ್ಸಿ ಗ್ರುಜ್ದೇವ್ ಅವರೊಂದಿಗೆ ಸಭೆಗಳನ್ನು ನಡೆಸಿದರು.

<><><><>

ಸಿಂಗಾಪುರದಲ್ಲಿ ನಿನ್ನೆ ಭಾರತ ಮತ್ತು ಸಿಂಗಾಪುರ ನಡುವಿನ ೧೮ನೇ ಸುತ್ತಿನ ವಿದೇಶಾಂಗ ಕಚೇರಿ ಸಮಾಲೋಚನೆಗಳು ನಡೆದವು. ವಿದೇಶಾಂಗ ಸಚಿವಾಲಯದ ಪೂರ್ವ ವಲಯದ ಕಾರ್ಯದರ್ಶಿ ಜೈದೀಪ್ ಮುಜುಂದಾರ್ ಭಾರತೀಯ ನಿಯೋಗದ ನೇತೃತ್ವವನ್ನು ವಹಿಸಿದ್ದರು. ಸಿಂಗಾಪುರ ತಂಡದ ನೇತೃತ್ವವನ್ನು ವಿದೇಶಾಂಗ ಸಚಿವಾಲಯದ ಖಾಯಂ ಕಾರ್ಯದರ್ಶಿ ಲ್ಯೂಕ್ ಗೋ ವಹಿಸಿದ್ದರು. ಸಹ-ಅಧ್ಯಕ್ಷರು ಭಾರತ-ಸಿಂಗಾಪುರ ದ್ವಿಪಕ್ಷೀಯ ಮತ್ತು ಬಹುಪಕ್ಷೀಯ ಸಹಕಾರದ ಪ್ರಗತಿಯನ್ನು ಪರಿಶೀಲಿಸಿದರು ಹಾಗೂ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡರು.

<><><><>

ಕೇಂದ್ರ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ಅವರು ಮುಂಬೈನಲ್ಲಿ ಜಾಗತಿಕ ದೃಶ್ಯ-ಶ್ರವ್ಯ ಮತ್ತು ಮನರಂಜನಾ ಶೃಂಗಸಭೆ - ವೇವ್ಸ್‌ಗಾಗಿ ಸಿದ್ಧತೆಗಳನ್ನು ಮೇಲ್ವಿಚಾರಣೆ ಮಾಡಲು ನಿನ್ನೆ ಸಭೆ ನಡೆಸಿದರು. ಜಂಟಿ ಕಾರ್ಯದರ್ಶಿಗಳಾದ ಸಂಜೀವ್ ಶಂಕರ್, ಸಿ. ಸೆಂಥಿಲ್ ರಾಜನ್ ಮತ್ತು ಅಜಯ್ ನಾಗಭೂಷಣ್ ಎಂ.ಎನ್. ಅವರು ಸಭೆಯಲ್ಲಿ ಭಾಗವಹಿಸಿದ್ದರು.

<><><><>

ಉತ್ತರ ಪ್ರದೇಶದ ಏಕನಾ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ೨೦ ಕ್ರಿಕಟ್ ಪಂದ್ಯದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಯುಪಿ ವಾರಿಯರ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.  ಲಕ್ನೋದಲ್ಲಿ ನಿನ್ನೆ ರಾತ್ರಿ ನಡೆದ ಪಂದ್ಯದಲ್ಲಿ ಗುಜರಾತ್ ಜೈಂಟ್ಸ್ ದೆಹಲಿ ಕ್ಯಾಪಿಟಲ್ಸ್ ಅನ್ನು ೫ ವಿಕೆಟ್‌ಗಳಿಂದ ಸೋಲಿಸಿದೆ.

<><><><>

ಫ್ರಾನ್ಸ್‌ನಲ್ಲಿ ನಡೆಯುತ್ತಿರುವ ಓರ್ಲಿಯನ್ಸ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ಪುರುಷರ ಸಿಂಗಲ್ಸ್ ಸೆಮಿಫೈನಲ್‌ನಲ್ಲಿಂದು ಭಾರತದ ಆಯುಷ್ ಶೆಟ್ಟಿ, ತೈವಾನ್‌ನ ಲಿನ್ ಚುನ್-ಯಿ ಅವರನ್ನು ಎದುರಿಸಲಿದ್ದಾರೆ. ಪಂದ್ಯವು ಭಾರತೀಯ ಕಾಲಮಾನ ಸಂಜೆ ೪.೫೦ಕ್ಕೆ ಪ್ರಾರಂಭವಾಗಲಿದೆ.

<><> **ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು** <><>